ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 581(577) |
| ಸದಸ್ಯರ ಹೆಸರು | : | ಶ್ರೀ ಸುನೀಲ್‌ಗೌಡ ಪಾಟೀಲ್(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.12.2024 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಪ್ರಸ್ತುತ ಆರ್ಥಿಕ ವರ್ಷದಲ್ಲಿ 15ನೇ ಹಣಕಾಸು ಯೋಜನೆಯಡಿಯಲ್ಲಿ ಗ್ರಾಮ ಪಂಚಾಯತಿಗಳಿಗೆ ಯಾವುದೇ ಅನುದಾನದ ಕಂತುಗಳು ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಹಣ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; | ಇಲ್ಲ. |
| ಆ) | ಅನುದಾನ ಬಿಡುಗಡೆ ಮಾಡಲು ಹಣಕಾಸಿನ ಕೊರತೆ/ತೊಂದರೆ ಏನಾದರೂ ಇದೆಯೇ; ಇಲ್ಲದಿದ್ದರೆ, ಅನುದಾನ ಬಿಡುಗಡೆ ಮಾಡದಿರಲು ಕಾರಣವೇನು; (ವಿವರ ನೀಡುವುದು) | ಇಲ್ಲ.<br>ಪ್ರಸ್ತುತ ಆರ್ಥಿಕ ವರ್ಷದಲ್ಲಿ 15ನೇ ಹಣಕಾಸು ಯೋಜನೆಯಡಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಮೊದಲನೇ ಕಂತಿನ ಮೂಲ (ಅನಿರ್ಬಂಧಿತ) ಅನುದಾನ ರೂ.448.29ಕೋಟಿಗಳನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸಲಾಗಿರುತ್ತದೆ (ಆದೇಶದ ಪ್ರತಿ ಲಗತ್ತಿಸಿದೆ).<br>ಬಾಕಿ ಉಳಿದ ಅನುದಾನವನ್ನು ಕೇಂದ್ರ ಸರ್ಕಾರವು ಬಿಡುಗಡೆಗೊಳಿಸಿದ ನಂತರ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಗೊಳಿಸಲಾಗುವುದು. |
| ಇ) | 15ನೇ ಹಣಕಾಸಿನ ಯೋಜನೆಗೆ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಪ್ರಸ್ತುತ ಆರ್ಥಿಕ ವರ್ಷದಲ್ಲಿ ಎಷ್ಟು ಅನುದಾನ ಬಿಡುಗಡೆಯಾಗಿದೆ ಮತ್ತು ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು? (ವಿವರ ನೀಡುವುದು) | 2024-25ನೇ ಸಾಲಿನಲ್ಲಿ 15ನೇ ಹಣಕಾಸಿನ ಯೋಜನೆಯಡಿ ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಒಟ್ಟು ರೂ.2241.45ಕೋಟಿಗಳು ಹಂಚಿಕೆಯಾಗಿದ್ದು, ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಮೊದಲನೇ ಕಂತಿನ ಮೂಲ (ಅನಿರ್ಬಂಧಿತ) ಅನುದಾನ ರೂ.448.29ಕೋಟಿಗಳು ಬಿಡುಗಡೆಯಾಗಿದೆ ಮತ್ತು ರೂ.1793.16ಕೋಟಿಗಳ ಅನುದಾನ ಬಿಡುಗಡೆಗೆ ಬಾಕಿಯಿರುತ್ತದೆ. |

**ಗ್ರಾಅಪಂರಾ 215 ಜಿಪಸ 2024**

(ಪ್ರಿಯಾಂಕ್ ಖರ್ಗೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

## ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ನಡವಳಿಗಳು

**ವಿಷಯ:** 2024-25ನೇ ಸಾಲಿನ 15ನೇ ಹಣಕಾಸು ಆಯೋಗದ ಮೊದಲನೇ ಕಂತಿನ ಮೂಲ(ಅನಿರ್ಬಂಧಿತ) ಅನುದಾನವನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:1.** ಮಾರ್ಗಸೂಚಿ ಸಂಖ್ಯೆ:ಕಪಂರಾಆ/ ಅಭಿವೃದ್ಧಿ/580/2024, ದಿನಾಂಕ: 27.09.2024.

**2.** ಭಾರತ ಸರ್ಕಾರದ ವಿತ್ತ ಮಂತ್ರಾಲಯ, ವೆಚ್ಚ ಇಲಾಖೆ, ಆರ್ಥಿಕ ಆಯೋಗ ವಿಭಾಗದ ಪತ್ರ ಸಂಖ್ಯೆ:ಎಫ್.15(4)ಎಫ್‌ಸಿ-XV/ಎಫ್‌ಸಿಡಿ/2020-25, ದಿನಾಂಕ:18.11.2024

**3.** ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 98 ಆಆಕೋ 2024, & CC No: FD 13 BGL 2023, ದಿನಾಂಕ:19.11.2024

*****

**ಪ್ರಸ್ತಾವನೆ:**

15ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ 2024-25ನೇ ಸಾಲಿಗೆ **ಒಟ್ಟು ₹ 263700.00 ಲಕ್ಷಗಳ** ಅನುದಾನವನ್ನು ಭಾರತ ಸರ್ಕಾರವು ನಿಗಧಿಪಡಿಸಿದ್ದು, ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ಶೇ.85ರಷ್ಟು ಅನುದಾನ **₹ 224145.00 ಲಕ್ಷಗಳನ್ನು** ಗ್ರಾಮ ಪಂಚಾಯತಿಗಳಿಗೆ ಹಂಚಿಕೆ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಹಾಗೂ (3)ರ ಆರ್ಥಿಕ ಇಲಾಖೆಯ ಜಮಾ ಧೃಡೀಕರಣ ಪತ್ರ ಹಾಗೂ ಅನಧಿಕೃತ ಟಿಪ್ಪಣಿಯನ್ವಯ 2024-25ನೇ ಸಾಲಿನ ಮೂಲ (ಅನಿರ್ಬಂಧಿತ) ಅನುದಾನದ ಮೊದಲನೇ ಕಂತು ₹ 44829.00 ಲಕ್ಷಗಳನ್ನು ರಾಜ್ಯದ ಬೊಕ್ಕಸಕ್ಕೆ ಜಮೆಯಾಗಿರುವ ಕುರಿತು ದೃಢೀಕರಣವನ್ನು ನೀಡಿರುತ್ತದೆ.

ಅದರಂತೆ, 2024-25ನೇ ಸಾಲಿನ ಆರ್ಥಿಕ ವರ್ಷದ ಆಯವ್ಯಯದಲ್ಲಿ ಗ್ರಾಮ ಪಂಚಾಯತಿಗಳಿಗೆ ಲೆಕ್ಕ ಶೀರ್ಷಿಕೆ:2515-00-198-6-13ರಡಿ ಒದಗಿಸಲಾಗಿರುವ ₹ 224145.00 ಲಕ್ಷಗಳಲ್ಲಿ 15ನೇ ಹಣಕಾಸು ಆಯೋಗದ ಮೂಲ (ಅನಿರ್ಬಂಧಿತ) ಅನುದಾನದ ಮೊದಲನೇ ಕಂತು ₹ 44829.00 (ನಲವತ್ತನಾಲ್ಕು ಸಾವಿರದ ಎಂಟುನೂರ ಇಪ್ಪತ್ತೊಂಭತ್ತು ಲಕ್ಷ ರೂಪಾಯಿಗಳು ಮಾತ್ರ) ಲಕ್ಷಗಳನ್ನು ಅನುಬಂಧದನ್ವಯ ರಾಜ್ಯದ 5950 ಗ್ರಾಮ ಪಂಚಾಯತಿಗಳಿಗೆ ಖಜಾನೆ-2ರ BMS ಮೂಲಕ ಸಂಬಂಧಿಸಿದ 15ನೇ ಹಣಕಾಸು ಆಯೋಗ ಅನುದಾನದ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲು ನಿರ್ಧರಿಸಿದೆ.

ಆದುದರಿಂದ, ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ:KPRC-DEV/580/2024, ಬೆಂಗಳೂರು ದಿನಾಂಕ:26.11.2024**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 2024-25ನೇ ಸಾಲಿನ ಆರ್ಥಿಕ ವರ್ಷದ ಆಯವ್ಯಯದಲ್ಲಿ ಗ್ರಾಮ ಪಂಚಾಯಿತಿಗಳಿಗೆ ಲೆಕ್ಕ ಶೀರ್ಷಿಕೆ:2515-00-198-6-13ರಡಿ ಒದಗಿಸಲಾಗಿರುವ ₹ 224145.00 ಲಕ್ಷಗಳಲ್ಲಿ 15ನೇ ಹಣಕಾಸು ಆಯೋಗದ ಮೂಲ(ಅನಿರ್ಬಂಧಿತ) ಅನುದಾನದ ಮೊದಲನೇ ಕಂತು ₹ 44829.00 (ನಲವತ್ತನಾಲ್ಕು ಸಾವಿರದ ಎಂಟುನೂರ ಇಪ್ಪತ್ತೊಂಭತ್ತು ಲಕ್ಷ ರೂಪಾಯಿಗಳು ಮಾತ್ರ) ಲಕ್ಷಗಳನ್ನು ಈ ಆದೇಶಕ್ಕೆ ಲಗತ್ತಿಸಲಾದ **ಅನುಬಂಧದನ್ವಯ** ರಾಜ್ಯದ 5950 ಗ್ರಾಮ ಪಂಚಾಯತಿಗಳಿಗೆ ಖಜಾನೆ-2ರ BMS ಮೂಲಕ ಸಂಬಂಧಿಸಿದ 15ನೇ ಹಣಕಾಸು ಆಯೋಗ ಅನುದಾನದ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ/02/ಟಿಎಫ್‌ಪಿ/2024, ದಿನಾಂಕ:01.04.2024 ಸಹಮತಿಯನ್ವಯ ಹೊರಡಿಸಲಾಗಿದೆ.

(ಸ.ಅ.ಮು.ಕಾ (ಪಂ.ರಾಜ್) ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ರವರಿಂದ ಅನುಮೋದಿತ)

ನಿರ್ದೇಶಕರು(ಅಭಿವೃದ್ಧಿ)
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ
ಬೆಂಗಳೂರು

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
5. ವಿಶೇಷಾಧಿಕಾರಿ (ಜಿ.ಪಂ), ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ವಿಶೇಷಾಧಿಕಾರಿ, ವಿತ್ತೀಯ ಸುಧಾರಣೆ ಮತ್ತು ಗಣಕಕೋಶ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಆ.ಆ.ಕೋ&ವಿಶ್ರಾಂತಿ ವೇತನ), ವಿಧಾನಸೌಧ, ಬೆಂಗಳೂರು.
9. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
10. ಆರ್ಥಿಕ ಅಧಿಕಾರಿ, ಲೆಕ್ಕ ಪತ್ರ ಶಾಖೆ, ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರ ಅಗತ್ಯ ಕ್ರಮಕ್ಕಾಗಿ.
11. ಮುಖ್ಯ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿ, ಕರ್ನಾಟಕ ವಿಕಾಸ – ಪತ್ರಿಕೆಯಲ್ಲಿ ಪ್ರಕಟಿಸಲು.
12. ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ – ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
13. ಶಾಖಾ ರಕ್ಷಾ ಕಡತ.

ಪ್ರತಿಯನ್ನು ಮಾಹಿತಿಗಾಗಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
4. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ರವರ ಆಪ್ತ ಸಹಾಯಕರು.
5. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಬಿ &ಆರ್) ರವರ ಆಪ್ತ ಕಾರ್ಯದರ್ಶಿಗಳು.
6. ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.